# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ನಾರಾಯಣಗುರು ರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳ ಸ್ಥಳಗಳಲ್ಲಿ ತಲಾ 01 ಶ್ರೀ ನಾರಾಯಣ ಗುರು ವಸತಿ ಶಾಲೆಗಳನ್ನು ಪ್ರಾರಂಭಿಸುವ ಕುರಿತು.

**ಓದಲಾಗಿದೆ:-**
1. 2022-23ನೇ ಸಾಲಿನ ಆಯವ್ಯಯ ಭಾಷಣ ಕಂಡಿಕೆ-168.
2. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 231 ಬಿಎಂಎಸ್ 2022, ದಿನಾಂಕ:11.04.2022.
3. ಮಾನ್ಯ ಇಲಾಖಾ ಸಚಿವರ ಟಿಪ್ಪಣಿ ಸಂಖ್ಯೆ: ಸ.ಕ.ಹಿ.ವ/ಸ/2268/2021-22, ದಿನಾಂಕ:30.04.2022.

ಕ. ವ. ಶಿ. ಸ. ಸ.
ಬೆಂಗಳೂರು
04 MAY 2022
72
ದಿನಾಂಕ.........
ಸಹಿ.........

*********

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ 2022-23ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ-168 ರಲ್ಲಿ ಮಾನ್ಯ ಮುಖ್ಯಮಂತ್ರಿಯವರು "ಮಾನವೀಯತೆ, ಸಮಾನತೆಯ ಹರಿಕಾರ ಶ್ರೀ ನಾರಾಯಣ ಗುರು ರವರ ಸ್ಮರಣಾರ್ಥ ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದು "ಶ್ರೀ ನಾರಾಯಣ ಗುರು ವಸತಿ ಶಾಲೆಯನ್ನು ಪ್ರಾರಂಭಿಸಲಾಗುವುದು" ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2) ರಲ್ಲಿ 2022-23ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ-168 ರಲ್ಲಿ ಘೋಷಿಸಿರುವಂತೆ, ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದರಂತೆ ಶ್ರೀ ನಾರಾಯಣ ಗುರು ವಸತಿ ಶಾಲೆಯನ್ನು ಪ್ರಾರಂಭಿಸಲು ಸರ್ಕಾರವು ಅನುಮತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಟಪ್ಪಣಿಯಲ್ಲಿ 2022-23ನೇ ಸಾಲಿಗೆ ಮಾನ್ಯ ಮುಖ್ಯಮಂತ್ರಿಗಳು ಬಜೆಟ್‌ನಲ್ಲಿ ಘೋಷಣೆ ಮಾಡಿದಂತೆ, ನಾರಾಯಣ ಗುರು ವಸತಿ ಶಾಲೆಗಳನ್ನು ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ತಾಲ್ಲೂಕು ಪುಂಜಾಲುಕಟ್ಟೆ ಗ್ರಾಮ, ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕು, ಬೇಳೂರು ಗ್ರಾಮ, ಉತ್ತರ ಕನ್ನಡ ಜಿಲ್ಲೆ, ಭಟ್ಕಳ ತಾಲ್ಲೂಕು, ಜಾಲಿ ಪಟ್ಟಣ ಪಂಚಾಯಿತಿ, ಜಾಲಿ ಗ್ರಾಮ,, ಶಿವಮೊಗ್ಗ ಜಿಲ್ಲೆ, ಸೊರಬ ತಾಲ್ಲೂಕು, ಸೊರಬ ಪುರಸಭೆ ವ್ಯಾಪ್ತಿ ಹಿರೇಶಕುನ ಗ್ರಾಮಗಳಲ್ಲಿ ವಸತಿ ಶಾಲೆಗಳನ್ನು ಪ್ರಾರಂಭಿಸುವ ಕುರಿತು ಆದೇಶವನ್ನು ಹೊರಡಿಸುವಂತೆ ಮಾನ್ಯ ಇಲಾಖಾ ಸಚಿವರು ಸೂಚಿಸಿರುತ್ತಾರೆ.

ಈ ಮೇಲಿನ ಆಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 231 ಬಿಎಂಎಸ್ 2022,**

**ಬೆಂಗಳೂರು, ದಿನಾಂಕ: 04-05-2022**

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2022-23ನೇ ಸಾಲಿನ ಆಯ-ವ್ಯಯ ಭಾಷಣ ಕಂಡಿಕೆ-168 ರಲ್ಲಿ ಘೋಷಿಸಿರುವಂತೆ, ಉಡುಪಿ, ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ತಲಾ ಒಂದರಂತೆ ಶ್ರೀ ನಾರಾಯಣ ಗುರು ವಸತಿ ಶಾಲೆಗಳನ್ನು ಈ ಕೆಳಕಂಡ ಸ್ಥಳಗಳಲ್ಲಿ ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

ದಕ್ಷಿಣ ಕನ್ನಡ ಜಿಲ್ಲೆ, ಬಂಟ್ವಾಳ ತಾಲ್ಲೂಕು, ಪುಂಜಾಲುಕಟ್ಟೆ ಗ್ರಾಮ.

2. ಉಡುಪಿ ಜಿಲ್ಲೆ, ಕುಂದಾಪುರ ತಾಲ್ಲೂಕು, ಬೇಳೂರು ಗ್ರಾಮ.
3. ಉತ್ತರ ಕನ್ನಡ ಜಿಲ್ಲೆ, ಭಟ್ಕಳ ತಾಲ್ಲೂಕು, ಜಾಲಿ ಪಟ್ಟಣ ಪಂಚಾಯಿತಿ, ಜಾಲಿ ಗ್ರಾಮ.
4. ಶಿವಮೊಗ್ಗ ಜಿಲ್ಲೆ, ಸೊರಬ ತಾಲ್ಲೂಕು, ಸೊರಬ ಪುರಸಭೆ ವ್ಯಾಪ್ತಿ, ಹಿರೇಶಕುನ ಗ್ರಾಮ.

ಸದರಿ ಸ್ಥಳಗಳಲ್ಲಿ ವಸತಿ ಶಾಲೆಗಳನ್ನು ಸ್ಥಾಪಿಸಲು ಅಗತ್ಯವಿರುವ ಭೂಮಿ/ನಿವೇಶನದ ವಿವರಗಳನ್ನು ಒಳಗೊಂಡಂತೆ ಸಮಗ್ರ ಪ್ರಸ್ತಾವನೆಯನ್ನು ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರು ಕೂಡಲೇ ಸಲ್ಲಿಸುವುದು.

ಈ ಆದೇಶವನ್ನು ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ
04/05/2022
**(ಷಾಹೀನ್ ಪರ್ವೀನ್ . ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ) ವಿಧಾನಸೌಧ, ಬೆಂಗಳೂರು.
4. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
5. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ:-</u>

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ , ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********